**ಮೊದಲನೇ ಅಪರ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಕನಕಪುರ.**
CC No. 303/2013

CW -4 PW -5

| | | |
|---|---|---|
| ಹೆಸರು | ಃ | ದಿನೇಶ್ |
| ತಂದೆಯ ಹೆಸರು | ಃ | ಕರಿಯಪ್ಪ |
| ವಯಸ್ಸು | ಃ | 40 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸ | ಃ | ಬಾಪೂಜಿ ಕಾಲೋನಿ |

ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಃ ಮಾನ್ಯ ಎಪಿಪಿ ಯವರಿಂದ ಃ ದಿನಾಂಕ 29.09.2022

ನ್ಯಾಯಾಲಯದ ಮುಂದಿರುವ 3 ನೇ ಆರೋಪಿ ನನಗೆ ಗೊತ್ತು. ಈ ದಿನ ನ್ಯಾಯಾಲಯಕ್ಕೆ 2 ಮತ್ತು 3 ನೇ ಆರೋಪಿತರು ಗೈರು ಹಾಜರಿದ್ದು ಅವರ ಗುರುತಿಸುವಿಕೆಗೆ ಆರೋಪಿ ಪರ ವಕೀಲರು ಯಾವುದೇ ತಕರಾರು ಇರುವುದಿಲ್ಲ ಎಂದು ನುಡಿಯುತ್ತಾರೆ. ಚಾಸಾ-1 ರಿಂದ 3, 5 ರಿಂದ 7 ರವರು ಗೊತ್ತು. ಅವರು ನಮ್ಮ ಊರಿನವರು.

ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ. ನಾನು ಯಾವುದೇ ಗಲಾಟೆಯನ್ನು ಕಣ್ಣಾರೆ ನೋಡಿರುವುದಿಲ್ಲ ಮತ್ತು ಯಾವುದೇ ಗಲಾಟೆಯನ್ನು ಬಿಡಿಸಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲುಗೆ ಅನುಮತಿ ಕೋರಿರುತ್ತಾರೆ. ಅನುಮತಿಸಲಾಯಿತು)**

ದಿಃ 09.11.2012 ರಂದು ಬೆಳಿಗ್ಗೆ 9 ಗಂಟೆ ಸಮಯದಲ್ಲಿನಾನು ಚಾಸಾ-1 ರವರ ಮನೆಯ ಹತ್ತಿರ ಇದ್ದಾಗ, ಆರೋಪಿತರು ಚಾಸಾ-1 ರವರ ಮನೆಯ ಬಳಿ ಬಂದು ಚಾಸಾ-1 ರವರಿಗೆ ನೀವು ನಮ್ಮ ಕೆರೆ ಹತ್ತಿರ ದನದ ಮೈ ತೊಳೆಯಲು ಏಕೆ ಹೋಗಿದ್ದಿ ಎಂದು ಅವಾಚ್ಯ ಶಬ್ದಗಳಿಂದ ಬೈದು, 3 ನೇ ಆರೋಪಿ ದೊಣ್ಣೆಯಿಂದ ಚಾಸಾ-1 ರವರ ಎಡಭುಜದ ಮೇಲೆ ಹೊಡೆದು, 2 ನೇ ಆರೋಪಿ ಕಲ್ಲಿನಿಂದ ಕೈಕಾಲುಗಳಿಗೆ ಗುದ್ದಿ, 1 ನೇ ಆರೋಪಿ ಚಾಸಾ-1 ರವರ ತಲೆ ಜುಟ್ಟು ಹಿಡಿದು ಎಳೆದಾಡಿ ಕೆಳಗೆ ಕೆಡವಿ ಕಾಲಿನಿಂದ ಒದ್ದು ನೋವುಂಟು ಮಾಡಿದರು ಎಂದರೆ ಸರಿಯಲ್ಲ. ಅಷ್ಟರಲ್ಲಿ ನಾನು ಮತ್ತು ಚಾಸಾ-6 ಮತ್ತು 7 ರವರು ಹೋಗಿ ಜಗಳ ಬಿಡಿಸಿ

ಸಮಾಧಾನ ಮಾಡಿ ಕಳುಹಿಸಿದೆವು ಎಂದರೆ ಸರಿಯಲ್ಲ. ಆಗ ಆರೋಪಿತರು ಚಾಸಾ-1 ರವರು ಮತ್ತು ಅವರ ಗಂಡನಿಗೆ ಸಾಯಿಸುತ್ತೆವೆಂದು ಜೀವ ಬೆದರಿಕೆ ಹಾಕಿ ಹೋದರು ಎಂದರೆ ಸರಿಯಲ್ಲ. ಚಾಸಾ-1 ಮತ್ತು ಆಕೆಯ ಗಂಡ ಈ ಹಿಂದೆ ಆರೋಪಿತರ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದು, ಸದರಿಯವರು ಕೆಲಸ ಬಿಟ್ಟು ಬೇರೆ ಮನೆ ಕಟ್ಟಿಕೊಂಡು ವಾಸವಾಗಿದ್ದು, ಈ ಜಿದ್ದು ಇಟ್ಟುಕೊಂಡು ಆರೋಪಿತರು ಚಾಸಾ-1 ರವರ ಮೇಲೆ ಹಲ್ಲೆ ಮಾಡಿರುತ್ತಾರೆಂದರೆ ಸರಿಯಲ್ಲ. ನನಗೆ ಈಗ ಓದಿ ಹೇಳಿದಂತೆ ಪೋಲೀಸರ ಮುಂದೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ಆರೋಪಿಗಳೊಂದಿಗೆ ರಾಜೀ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ಶ್ರೀ. ವಕೀಲರಿಂದಃ**

ಏನು ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಮೊದಲನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಕನಕಪುರ